9. ವರದಿಗಳನ್ನೊಪ್ಪಿಸುವುದು:

ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು ನಗರ–ದಕ್ಷಿಣ) (ಅಧ್ಯಕ್ಷರು, ಇಸ್ಕಾನ್ ಸದನ ಸಮಿತಿ) : ಮಾನ್ಯ ಅಧ್ಯಕ್ಷರೆ, ಅಂತರರಾಷ್ಟ್ರೀಯ ಕೃಷ್ಣಪ್ರಜ್ಞಾ ಸಂಘ ಸಂಸ್ಥೆಯು ಸರ್ಕಾರದ ಸಹಭಾಗಿತ್ವದಿಂದ ನಡೆಸುತ್ತಿರುವ ಅಕ್ಷರ ದಾಸೋಹ ಕಾರ್ಯಕ್ರಮದ ಅವ್ಯವಹಾರದ ಕುರಿತು ರಚಿಸಲಾದ ಸದನ ಸಮಿತಿಯ ವರದಿಯನ್ನು ನಾನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು : ವರದಿಯನ್ನೊಪ್ಪಿಸಲಾಯಿತು.

ಶ್ರೀ ಕೆ. ರಘುಪತಿ ಭಟ್ (ಉಡುಪಿ) (ಅಧ್ಯಕ್ಷರು, ಅಧೀನ ಶಾಸನ ರಚನಾ ಸಮಿತಿ) : ಮಾನ್ಯ ಅಧ್ಯಕ್ಷರೆ, ಅಧೀನ ಶಾಸನ ರಚನಾ ಸಮಿತಿಯ 2009–10ನೇ ಸಾಲಿನ ಮೂವತ್ತೆಂಟನೇ ವರದಿಯನ್ನು ನಾನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು : ವರದಿಯನ್ನೊಪ್ಪಿಸಲಾಯಿತು.

ಶ್ರೀ ಡೆರಿಕ್ ಎಂ.ಬಿ. ಫುಲಿನ್ ಫಾ (ನಾಮನಿರ್ದೇಶನಗೊಂಡವರು–ಆಂಗ್ಲೋ ಇಂಡಿಯನ್) (ಅಧ್ಯಕ್ಷರು, ಹಕ್ಕುಬಾಧ್ಯತಾ ಸಮಿತಿ): ಹಕ್ಕುಬಾಧ್ಯತಾ ಸಮಿತಿಯ 2009–10ನೇ ಸಾಲಿನ ಮೊದಲನೇ, ಎರಡನೇ ಮತ್ತು ಮೂರನೇ ವರದಿಗಳನ್ನು ನಾನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು : ವರದಿಯನ್ನೊಪ್ಪಿಸುವುದು.

ಸಭಾಧ್ಯಕ್ಷರು (ಶ್ರೀ ಟಿ.ಬಿ. ಜಯಚಂದ್ರ, ಅಧ್ಯಕ್ಷರು, ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ, ಇವರ ಪರವಾಗಿ): ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ 2009–10ನೇ ಸಾಲಿನ ಆರನೇ, ಏಳನೇ, ಎಂಟನೇ ಹಾಗೂ ಒಂಭತ್ತನೇ ವರದಿಗಳನ್ನು ಸಭೆಗೆ ಒಪ್ಪಿಸುತ್ತೇನೆ.

ಶ್ರೀ ಎಂ.ಪಿ. ಅಪ್ಪಚ್ಚು ರಂಜನ್ (ಮಡಿಕೇರಿ) (ಅಧ್ಯಕ್ಷರು, ಅರ್ಜಿಗಳ ಸಮಿತಿ) : ಮಾನ್ಯ ಅಧ್ಯಕ್ಷರೆ, ಅರ್ಜಿಗಳ ಸಮಿತಿಯ 2009–10ನೇ ಸಾಲಿನ ಮೂರನೇ, ಐದನೇ, ಏಳನೇ ಹಾಗೂ ಎಂಟನೇ ವರದಿಗಳನ್ನು ನಾನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು: ವರದಿಗಳನ್ನೊಪ್ಪಿಸಲಾಯಿತು.

ಶ್ರೀ ಎಂ. ಚಂದ್ರಪ್ಪ (ಹೊಳಲ್ಕೆರೆ) (ಅಧ್ಯಕ್ಷರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ): ಮಾನ್ಯ ಅಧ್ಯಕ್ಷರೆ, ಮಹಿಳಾ ಮತ್ತು ಮಕ್ಕಳ

ಕಲ್ಯಾಣ ಸಮಿತಿಯ 2009–10ನೇ ಸಾಲಿನ ಇಪ್ಪತ್ತನೇ ವರದಿಯನ್ನು ನಾನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು : ವರದಿಯನ್ನೊಪ್ಪಿಸಲಾಯಿತು.

ಶ್ರೀ ಎಂ.ಕೆ. ಪಟ್ಟಣಶೆಟ್ಟಿ (ಅಧ್ಯಕ್ಷರು, ಸಾರ್ವಜನಿಕ ಉದ್ಯಮಗಳ ಸಮಿತಿ): ಮಾನ್ಯ ಅಧ್ಯಕ್ಷರೆ, ಸಾರ್ವಜನಿಕ ಉದ್ಯಮಗಳ ಸಮಿತಿಯ 2009–10ನೇ ಸಾಲಿನ ನೂರ ಇಪ್ಪತ್ತನೇ ಹಾಗೂ ನೂರ ಇಪ್ಪತ್ತೊಂದನೇ ವರದಿಯನ್ನೊಪ್ಪಿಸುತ್ತಿದ್ದೇನೆ.

ಅಧ್ಯಕ್ಷರು : ವರದಿಯನ್ನೊಪ್ಪಿಸಲಾಯಿತು.

10. ಚುನಾವಣಾ ಪ್ರಸ್ತಾವ:

ಶ್ರೀ ಎಸ್. ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಅಧಿನಿಯಮ, 2009ರ ಪ್ರಕರಣ 20(ಐ) ರನ್ವಯ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ (ಪ್ರಶಾಸನ ಸಭೆ) ಒಬ್ಬ ಸದಸ್ಯರನ್ನು ಚುನಾಯಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವವನ್ನು ಮಂಡಿಲಾಯಿತು.

11. ಎತ್ತೀಯ ಕಾರ್ಯಕಲಾಪ:

2010–11ನೇ ಸಾಲಿನ ಪೂರಕ ಅಂದಾಜುಗಳ ಮಂಡನೆಗೆ ಅನುಮತಿ ಕೋರಿಕೆ

ಅಧ್ಯಕ್ಷರು: 2010–11ನೇ ಸಾಲಿನ ಪೂರಕ ಅಂದಾಜುಗಳು (ಎರಡನೇ ಕಂತು) ಮಂಡಿಸುವುದು.

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿ ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, 2010–11ನೇ ಸಾಲಿನ ಪೂರಕ ಅಂದಾಜುಗಳು (ಎರಡನೇ ಕಂತು) ಅನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ಈ ಕೆಳಗಿನ ಪ್ರಸ್ತಾವಗಳನ್ನು ಮಂಡಿಸುತ್ತಿದ್ದೇನೆ.